**N. MANJUNATHA PRASAD, I.A.S.,**
Principal Secretary to Government
ಎನ್. ಮಂಜುನಾಥ ಪ್ರಸಾದ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ

Department of Revenue
ಕಂದಾಯ ಇಲಾಖೆ

ಅ.ಸ.ಪತ್ರಸಂಖ್ಯೆ. ಕಂಇ 17 ಭೂದಾ 2020 ದಿನಾಂಕ:05.03.2020.

ಮಾನ್ಯರೆ,

ಭೂಮಾಪನ ಇಲಾಖೆಗೆ ಅಗತ್ಯವಿರುವ 2072 ಪರವಾನಗಿ ಭೂಮಾಪಕರುಗಳ ಸೇವೆಯನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಗೆ ಪರವಾನಗಿ ವಿತರಿಸುವ ಸಲುವಾಗಿ ಆನ್ ಲೈನ್ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲು TATA CONSULTANCY SERVICES ಕಂಪೆನಿಯವರಿಗೆ ವಹಿಸಲಾಗಿದೆ. ಸದರಿ ಕಂಪೆನಿಯವರು ಆನ್ ಲೈನ್ ಸ್ಪರ್ಧಾತ್ಮಕ ಪರೀಕ್ಷೆಯನ್ನು ದಿನಾಂಕ: 15.03.2020 ರಂದು ನಡೆಸಲು ತಾತ್ಕಾಲಿಕವಾಗಿ ದಿನಾಂಕವನ್ನು ನಿಗದಿಪಡಿಸಿರುತ್ತಾರೆ.

ಪರವಾನಗಿ ಭೂಮಾಪಕರ ಸೇವೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತ್ವರಿತವಾಗಿ ಇಲಾಖೆಗೆ ಪಡೆಯಬೇಕಾಗಿರುವುದರಿಂದ, ಎಲ್ಲಾ ಜಿಲ್ಲಾಧಿಕಾರಿಗಳು ವೈಯಕ್ತಿಕ ಗಮನ ಹರಿಸಿ, ಇಲಾಖೆಯ ಸಹಯೋಗದೊಂದಿಗೆ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸುವ ಮೂಲಕ ಆನ್ ಲೈನ್ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಶಸ್ವಿಗೊಳಿಸುವಂತೆ ಕೋರಿದೆ.

1. ಆನ್ ಲೈನ್ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು ಸೂಕ್ತವಾದ ಇಂಜಿನಿಯರಿಂಗ್ / ಡಿಪ್ಲೊಮೊ ಕಾಲೇಜುಗಳ ಪಟ್ಟಿಯನ್ನು ಲಗತ್ತಿಸಿದೆ. ನಿಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಕಾಲೇಜುಗಳಿಗೆ ದಿನಾಂಕ: 15.03.2020 ರಂದು ಭೂಮಾಪನ ಪರವಾನಗಿ ವಿತರಿಸಲು ಅರ್ಹ ಅಭ್ಯರ್ಥಿಗಾಗಿ ನಡೆಸುವ ಆನ್ ಲೈನ್ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು TATA CONSULTANCY SERVICES ಕಂಪೆನಿಯವರಿಗೆ ಸಹಕಾರ ನೀಡಲು ಸೂಚನೆ ನೀಡುವುದು.
2. ಪರೀಕ್ಷಾ ಕೇಂದ್ರಗಳ ಮೇಲ್ವಿಚಾರಣೆಗೆ ಜಿಲ್ಲಾ ವ್ಯಾಪ್ತಿಯಲ್ಲಿನ ಇಲಾಖೆಯ ಅಧಿಕಾರಿಗಳನ್ನು ಹಾಗೂ ಅಗತ್ಯವಿದ್ದಲ್ಲಿ ಇತರೆ ಇಲಾಖೆಯ ಅಧಿಕಾರಿಗಳನ್ನು ನಿಯೋಜಿಸುವುದು.
3. ಪರೀಕ್ಷಾ ಕೇಂದ್ರಗಳಿಗೆ ಪರೀಕ್ಷಾ ದಿನಾಂಕಗಳಂದು ಅಗತ್ಯವಿರುವ ಭದ್ರತಾ ವ್ಯವಸ್ಥೆ ಕಲ್ಪಿಸುವುದು.
4. ಪರೀಕ್ಷೆ ನಡೆಸಲು ಅಗತ್ಯವಿರುವ ಇನ್ನಿತರೆ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದು.

ಆದರಗಳೊಂದಿಗೆ

ತಮ್ಮ ವಿಶ್ವಾಸಿ,

5/3/2020

ಎಲ್ಲಾ ಜಿಲ್ಲಾಧಿಕಾರಿಗಳಿಗೆ

5th Floor, 3rd Gate, M.S. Building,
Dr. B.R. Ambedkar Veedhi, Bengaluru-560 001
Tel: +91-80-22252731, 22032495
Fax: +91-80-22256384

5ನೇ ಮಹಡಿ, 3ನೇ ಗೇಟ್, ಬಹುಮಹಡಿ ಕಟ್ಟಡ
ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು–560001
E-mail:prs.revenue@gmail.com

Scanned by CamScanner
Scanned by CamScanner